# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:05-06-2015 ರ ನಡವಳಿಗಳು

## ವಿಷಯದ ಸಂಖ್ಯೆ : 70 / 2015-16

**ಪ್ರಸ್ತಾವನೆ:**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿವಿಧ ವಲಯಗಳ ವ್ಯಾಪ್ತಿಯಲ್ಲಿ ಇರುವ ಪಾಲಿಕೆಯ ಕ್ರೀಡಾಂಗಣ ಹಾಗೂ ಆಟದ ಮೈದಾನಗಳನ್ನು ಖಾಸಗಿ ಕಾರ್ಯಕ್ರಮಗಳಿಗೆ ದೈನಂದಿನ ಬಾಡಿಗೆ ಆಧಾರದ ಮೇಲೆ ದೀರ್ಘಾಕಾಲ ನೀಡುತ್ತಿರುವುದು ಕಂಡು ಬಂದಿರುತ್ತದೆ. ಈ ರೀತಿ ಅನುಮತಿ ಪಡೆದು ಖಾಸಗಿ ಕಾರ್ಯಕ್ರಮಗಳನ್ನು ಹಲವಾರು ದಿನಗಳ ಮಟ್ಟಿಗೆ ಆಯೋಜಿಸುತ್ತಿರುವುದರಿಂದ ಯುವಜನತೆ ಹಾಗೂ ವಿದ್ಯಾರ್ಥಿಗಳಿಗೆ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಲು ಅಡಚಣೆ ಉಂಟಾಗುತ್ತಿರುವುದರಿಂದ, ಇನ್ನು ಮುಂದೆ ತಿಂಗಳಲ್ಲಿ ಗರಿಷ್ಟ 05 (ಐದು ದಿವಸ ಮಾತ್ರ) ದಿನಗಳಿಗೆ ಮೀರದಂತೆ ಅದರಲ್ಲಿ ಗರಿಷ್ಟ ಒಂದು ಭಾನುವಾರವನ್ನು ಮಾತ್ರ ಖಾಸಗಿ ಕಾರ್ಯಕ್ರಮಕ್ಕೆ ಅನುಮತಿ ನೀಡುವ ಕುರಿತಂತೆ ಸೂಕ್ತ ಸುತ್ತೋಲೆ ನೀಡಲು ಆಯುಕ್ತರು ಅಗತ್ಯ ಕ್ರಮ ಕೈಗೊಳ್ಳಲು ನಿರ್ಣಯಿಸಿದೆ.

**ನಿರ್ಣಯ:** "ಪ್ರಸ್ತಾವನೆಯಲ್ಲಿರುವ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಮೇಲ್ಕಂಡ ಕ್ರಮಗಳನ್ನು ತ್ವರಿತಗತಿಯಲ್ಲಿ ಅಳವಡಿಸಿಕೊಳ್ಳಲು ಅಗತ್ಯ ಕ್ರಮಕೈಗೊಳ್ಳುವ ಸಲುವಾಗಿ 1976ರ ಕೆ.ಎಂ.ಸಿ ನಿಯಮ 43ರ ರೀತ್ಯ ನನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ನಿರ್ಣಯವನ್ನು ಕೈಗೊಳ್ಳಲು ತೀರ್ಮಾನಿಸಿದೆ".

(ಟಿ.ಎಂ.ವಿಜಯಭಾಸ್ಕರ್)
ಆಡಳಿತಗಾರರು